ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 :** **ದಿನಾಂಕ: 24–3–2015**

**ಪತ್ರಿಕಾ ಆಮಂತ್ರಣ**

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | | | |
| | | | |

ನಿರ್ದೇಶಕರ ಪರವಾಗಿ

# ಪತ್ರಿಕಾ ಪ್ರಕಟಣೆ

**ವಿಧಾನ ಮಂಡಲದ ಸುದ್ದಿಗಳು:**

## ರೈತರಿಗೆ 24 ಗಂಟೆ ವಿದ್ಯುತ್ ಪೂರೈಕೆ

**ಬೆಂಗಳೂರು, ಮಾರ್ಚ್ 24 (ಕರ್ನಾಟಕ ವಾರ್ತೆ)**

ರೈತರಿಗೆ 24 ಗಂಟೆ ವಿದ್ಯುತ್ ಪೂರೈಸಲು ಸರ್ಕಾರ ಸಿದ್ದವಾಗಿದೆ ಎಂದು ಇಂಧನ ಸಚಿವ ಡಿ. ಕೆ. ಶಿವಕುಮಾರ್ ಸ್ಪಷ್ಟಪಡಿಸಿದರು.

ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದಲ್ಲಿ ಸದಸ್ಯ ಎನ್.ಎಸ್. ಬೋಸ್‌ರಾಜು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು ನೀರಾವರಿ ಪ್ರದೇಶದಲ್ಲಿ ವ್ಯವಸಾಯ ಮಾಡುತ್ತಿರುವ ರೈತರು ತಮ್ಮ ಪಂಪ್ ಸೆಟ್‌ಗಳಿಗೆ ಎಚ್. ಟಿ. ಎಕ್ಸ್‌ಪ್ರೆಸ್ ಮಾರ್ಗದ ಮೂಲಕ ವಿದ್ಯುತ್ ಸಂಪರ್ಕವನ್ನು ಪಡೆಯಲು ಬಯಸಿದಲ್ಲಿ ಖಂಡಿತವಾಗಿಯೂ ಅವರಿಗೆ 24 ಗಂಟೆ ವಿದ್ಯುತ್ ಪೂರೈಕೆಗೆ ಕ್ರಮ ವಹಿಸಲಾಗುವುದೆಂದರು.

ಎಚ್. ಟಿ. ಮಾರ್ಗದಲ್ಲಿ 24 ಗಂಟೆ ವಿದ್ಯುತ್ ಸಂಪರ್ಕ ಪಡೆಯಲು ಬಯಸುವ ರೈತರು 1 ಕೆ. ವಿ. ಎಚ್. ಟಿ. ಮಾರ್ಗ ಹಾಗೂ ಇತರೆ ಉಪಕರಣಗಳಿಗೆ ತಗಲುವ ವೆಚ್ಚದಲ್ಲಿ ಶೇಕಡ 25 ರಷ್ಟನ್ನು ಭರಿಸಬೇಕಾಗುತ್ತದೆ. ಉಳಿದ ಶೇಕಡ 75 ರಷ್ಟು ಮೊತ್ತವನ್ನು ವಿದ್ಯುತ್ ಸರಬರಾಜು ಕಂಪನಿಗಳು ಭರಿಸುತ್ತವೆ.

ಆದರೆ ಸರ್ಕಾರವು ಈ ಸೌಲಭ್ಯಕ್ಕಾಗಿ ಎಲ್ಲಾ ಜಾತಿಯ ರೈತರಿಗೂ ಒಂದೇ ಮಾನದಂಡವನ್ನು ಅನುಸರಿಸಲಾಗುತ್ತಿದ್ದು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಬೇರೆ ಮಾನದಂಡವನ್ನು ವಿಧಿಸಿರುವುದಿಲ್ಲವೆಂದು ಸ್ಪಷ್ಟಪಡಿಸಿದರು.

ಬಾಬು/ಪೂರ್ಣಿಮ/ಕೆಎಂ

## ಕರ್ನಾಟಕ ಧನ ವಿನಿಯೋಗ ವಿಧೇಯಕ – 2015 ಮಂಡನೆ, ಅಂಗೀಕಾರ

ಬೆಂಗಳೂರು, ಮಾರ್ಚ್ 24, (ಕರ್ನಾಟಕ ವಾರ್ತೆ)

ರಾಜ್ಯ ವಿಧಾನಸಭೆಯಲ್ಲಿ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 4713.49 ಕೋಟಿ ರೂ. ಗಳ 2015 ನೇ ಸಾಲಿನ ಕರ್ನಾಟಕ ಧನ ವಿನಿಯೋಗ ವಿಧೇಯಕವನ್ನು ಮಂಡಿಸಿದರು. ಈ ವಿಧೇಯಕವನ್ನು ವಿಧಾನಸಭೆಯು ಧ್ವನಿ ಮತದಿಂದ ಅಂಗೀಕರಿಸಿತು.

ಬಾಬು:ಜಿಪಿಆರ್.

## ರಾಜ್ಯದಲ್ಲಿ ಪ್ರತಿದಿನ 169.229 ಲಕ್ಷ ಲೀಟರ್ ಹಾಲು ಉತ್ಪಾದನೆ

ಬೆಂಗಳೂರು, ಮಾರ್ಚ್ 24, (ಕರ್ನಾಟಕ ವಾರ್ತೆ)

ಪ್ರತಿ ದಿನ ರಾಜ್ಯದಲ್ಲಿ ಅಂದಾಜು 169.229 ಲಕ್ಷ ಲೀಟರ್ ಹಾಲು ಉತ್ಪಾದನೆಯಾಗುತ್ತಿದ್ದು, ಕರ್ನಾಟಕ ಹಾಲು ಮಹಾಮಂಡಳಿಯ 13 ಜಿಲ್ಲಾ ಒಕ್ಕೂಟಗಳಿಂದ ಸರಾಸರಿ 59 ಲಕ್ಷ ಲೀಟರ್ ಹಾಲನ್ನು ಸಂಗ್ರಹಿಸಲಾಗುತ್ತಿದೆ. ಉಳಿದಂತೆ ಖಾಸಗಿ ಡೈರಿಗಳು ಹಾಲನ್ನು ಸಂಗ್ರಹಿಸುತ್ತವೆ ಹಾಗೂ ಖಾಸತಿ ಬಳಕೆಗೆ ಹಾಲನ್ನು ಸಂಗ್ರಹಿಸಲಾಗುತ್ತಿದೆ ಎಂದು ರಾಜ್ಯ ಕಾನೂನು ಸಂಸದೀಯ ವ್ಯವಹಾರಗಳು, ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವ ಶ್ರೀ ಡಿ. ಬಿ. ಜಯಚಂದ್ರ ಅವರು ಇಂದು ವಿಧಾನಸಭೆಯಲ್ಲಿ ಭಾಲ್ಕಿ ಕ್ಷೇತ್ರದ ಶಾಸಕ ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ ಅವರ ಪ್ರಶ್ನೆಗೆ ನೀಡಿದ ಲಿಖಿತ ಉತ್ತರದಲ್ಲಿ ತಿಳಿಸಿದರು.

ಈ ರೀತಿ ಸಂಗ್ರಹಿಸಿದ ಹಾಲು ರಾಜ್ಯದ ದಿನವಹಿ ಉಪಯೋಕ್ಕೆ ಸಾಕಾಗುವುದಿಲ್ಲ. ಅದಕ್ಕಾಗಿ ಹಾಲಿನ ಉತ್ಪಾದನೆ ಮತ್ತು ಸಂಗ್ರಹಣೆಯನ್ನು ಹೆಚ್ಚಿಸಲು ರಾಜ್ಯ ಸರ್ಕಾರದಿಂದ ಈ ಕೆಳಗಿನ ಕ್ರಮಗಳನ್ನು ಕೈಗೊಳ್ಳಲಾಗಿದೆ. ಹಾಲು ಉತ್ಪಾದಕರಿಗೆ ಪ್ರೋತ್ಸಾಹಧನ ಯುಓಜನೆಯಡಿ ಹಾಲು ಸಹಕಾರ ಸಂಘಗಳಿಗೆ ಸರಬರಾಜು ಮಾಡುವ ಪ್ರತಿ ಲೀಟರ್ ಹಾಲಿಗೆ ರೂ 4/– ರ ಪ್ರೋತ್ಸಾಹ ಧನ ನೀಡಲಾಗುತ್ತಿದೆ. ಆಸಕ್ತ ಹೈನುಗಾರರಿಗೆ ನಬಾರ್ಡ್ ಯೋಜನೆ ಮೂಲಕ ಸಾಲ ಮತ್ತು ಸಹಾಯಧನ ವಿತರಿಸಿ ಹೈನುಗಾರಿಕೆಗೆ ಉತ್ತೇಜನ ನೀಡಲಾಗುತ್ತಿದೆ. ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ವಿಶೇಷ ಘಟಕ ಮತ್ತು ಗಿರಿಜನ ಉಪಯೋಜನೆ ಮತ್ತು ಅಮೃತ ಯೋಜನೆಯಡಿ ಸಹಾಯಧನ ನೀಡಿ ಹೈನುಗಾರಿಕಾರ ಘಟಕಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಮೇವು ಅಭಿವೃದ್ಧಿ ಕಾರ್ಯಕ್ರಮದಡಿ ರೈತರಿಗೆ ಮೇವು ಬೆಳೆಯಲು ಮೇವಿನ ಕಿರುಪೊಟ್ಟಣಗಳನ್ನು ಉಚಿತವಾಗಿ

ಕಾಲಕಾಲಕ್ಕೆ ಸರಬರಾಜು ಮಾಡಲಾಗುತ್ತಿದೆ. ರೈತರ ಜಮೀನನಲ್ಲಿ ಮೇವು ಪ್ರಾತ್ಯಕ್ಷತೆಗಳನ್ನು ಸ್ಥಾಪಿಸಲು 50% ಸಹಾಯಧನದಡಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಇದರಿಂದ ಹಾಲಿನ ಉತ್ಪಾದನೆ ಹೆಚ್ಚಳವಾಗಲಿದೆ.

ದಿನವಹಿ ಬಳಕೆಯಾಗದೇ ಉಳಿದ ದ್ರವ ರೂಪದ ಹಾಲನ್ನು ಕರ್ನಾಟಕ ಹಾಲು ಮಹಾಮಂಡಳಿಯವರು ಹಾಗೂ ಖಾಸಗಿಯವರು ಸಂಸ್ಕರಣೆ ಮಾಡಿ ಹಾಲಿನ ಪುಡಿ ಹಾಗೂ ಇತರೆ ಉಪ ಉತ್ಪನ್ನಗಳಾಗಿ ಪರಿವರ್ತಿಸಿ ಬಳಕೆ ಮಾಡುತ್ತಿದ್ದಾರೆ ಎಂದು ಸಚಿವರು ತಮ್ಮಲ್ಲಿ ಲಿಖಿತ ಉತ್ತರದಲ್ಲಿ ತಿಳಿಸಿದರು.

ಬಾಬು:ಜಿಪಿಆರ್.

## ಲಾಟರಿ ಯೋಜನೆ ಮತ್ತೆ ಜಾರಿ ಇಲ್ಲ

ಬೆಂಗಳೂರು, ಮಾರ್ಚ್ 24, (ಕರ್ನಾಟಕ ವಾರ್ತೆ)

ಈ ಹಿಂದಿನ ಸರ್ಕಾರ ರದ್ದುಪಡಿಸಲಾಗಿದ್ದ ಲಾಟರಿ ಯೋಜನೆಗಳನ್ನು ಮತ್ತೆ ಜಾರಿಗೆ ತರುವ ಪ್ರಸ್ತಾವನೆ ರಾಜ್ಯ ಸರ್ಕಾರದ ಮುಂದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ಪಷ್ಟಪಡಿಸಿದರು.

ಅವರು ಇಂದು ಪ್ರಶ್ನೋತ್ತರ ವೇಳೆಯಲ್ಲಿ ಚಿಕ್ಕಬಳ್ಳಾಪುರ ಕ್ಷೇತ್ರದ ಶಾಸಕ ಡಾ. ಕೆ. ಸುಧಾಕರ್ ಅವರ ಪ್ರಶ್ನೆಗೆ ಉತ್ತರಿಸುತ್ತಿದ್ದರು.

ಲಾಟರಿಯಿಂದ ಬರುವ ಆದಾಯಕ್ಕಿಂತ ಅನಾನುಕೂಲವೇ ಹೆಚ್ಚು ಎನ್ನುವುದು ಸರ್ಕಾರಕ್ಕೆ ಅರಿವಿದೆ. ಈಗಾಗಲೇ ರಾಜ್ಯ ಸರ್ಕಾರವು 2007 ರ ಏಪ್ರಿಲ್ 1 ರಿಂದ ಎಲ್ಲಾ ಬಗೆಯ ಲಾಟರಿಗಳನ್ನು ರದ್ದುಪಡಿಸಿ, ರಾಜ್ಯವನ್ನು "ಲಾಟರಿ ಮುಕ್ತವಲಯ" ವನ್ನಾಗಿ ಘೋಷಿಸಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಬಾಬು:ಜಿಪಿಆರ್.

## ದೇವಸ್ಥಾನಗಳ ಅಭಿವೃದ್ಧಿಗೆ 236.93 ಕೋಟಿ ರೂ. ಅನುದಾನ

ಬೆಂಗಳೂರು, ಮಾರ್ಚ್ 24, (ಕರ್ನಾಟಕ ವಾರ್ತೆ)

ಪ್ರಸ್ತುತ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ 2013-14 ಮತ್ತು 2014-2015 ನೇ ಸಾಲಿನಲ್ಲಿ ದೇವಸ್ಥಾನಗಳ ಅಭಿವೃದ್ಧಿಗಾಗಿ ವಿವಿಧ ಯೋಜನೆಗಳಡಿ ಒಟ್ಟು 236.93 ಕೋಟಿ ರೂ. ಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ ಎಂದು ರಾಜ್ಯ ಕಾನೂನು ಸಂಸದೀಯ ವ್ಯವಹಾರಗಳು, ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವ ಶ್ರೀ ಡಿ. ಬಿ. ಜಯಚಂದ್ರ ಅವರು ಇಂದು ವಿಧಾನಸಭೆಯಲ್ಲಿ ಪ್ರಶ್ನೋತ್ತರ ವೇಳೆಯಲ್ಲಿ ರಾಯಚೂರು (ಗ್ರಾಮಾಂತರ) ಕ್ಷೇತ್ರದ ಶಾಸಕ ಶ್ರೀ ತಿಪ್ಪರಾಜು ಅವರ ಪ್ರಶ್ನೆಗೆ ಉತ್ತರಿಸುತ್ತಾ ತಿಳಿಸಿದರು.

**ಹಿಂದೂ ಧಾರ್ಮಿಕ ಸಂಸ್ಥೆಗಳ ಮತ್ತು ಧರ್ಮಾದಾಯ ದತ್ತಿಗಳ ಇಲಾಖೆ ವ್ಯಾಪ್ತಿಗೆ ಬರುವ ಎಲ್ಲಾ ದೇವಾಲಯಗಳೂ ಮುಜರಾಯಿ ದೇವಸ್ಥಾನಗಳಾಗಿರುತ್ತದೆ ಹಾಗೂ ಉಳಿದ ದೇವಾಲಯಗಳು ಮುಜರಾಯೇತರ/ಖಾಸಗಿ ದೇವಾಲಯಗಳಾಗಿರುತ್ತದೆ. ದೇವಾಲಯಗಳ ಅಭಿವೃದ್ಧಿಗಾಗಿ ಮುಜರಾಯಿ ಇಲಾಖೆಯಿಂದ ಕಳೆದ 2 ವರ್ಷಗಳಲ್ಲಿ ಈ ಕೆಳಕಂಡ ಯೋಜನೆವಾರು ಒಟ್ಟು 236.93 ಕೋಟಿ ರೂ. ಗಳ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ.**

**ದುರಸ್ಥಿ ಜೀರ್ಣೋದ್ಧಾರ ಅಭಿವೃದ್ಧಿ: ಈ ಯೋಜನೆಯಡಿ ಸರ್ಕಾರದಿಂದ ಮುಜರಾಯಿ ಮತ್ತು ಮುಜರಾಯೇತರ ದೇವಾಲಯಗಳಿಗೆ ಕ್ರೋಢೀಕರಿಸಿ ದುರಸ್ಥಿ/ಜೀರ್ಣೋದ್ಧಾರ/ಅಭಿವೃದ್ಧಿ ಯೋಜನೆಯಡಿ ಮುಜರಾಯಿ/ಮುಜರಾಯೇತರ ದೇವಸ್ಥಾನಗಳಿಗೆ ಅನುದಾನ ಮಂಜೂರು ಮಾಡಿದ್ದು, ಕಳದ ಎರಡು ವರ್ಷಗಳಲ್ಲಿ ಒಟ್ಟು 177.33 ಕೋಟಿ ರೂ ಗಳ ಅನುದಾನ ಬಿಡುಗಡೆ ಮಾಡಿದ ಜಿಲ್ಲಾವಾರು ಪಟ್ಟಿಯನ್ನು ಅನುಬಂಧ-1 ರಲ್ಲಿ ಒದಗಿಸಿದೆ. ದೇವಸ್ಥಾನವಾರು ಮಾಹಿತಿ ಹೆಚ್ಚು ಪ್ರಮಾಣದಲ್ಲಿದ್ದು, ಈ ಮಾಹಿತಿಯನ್ನು ಸಂಬಂಧಪಟ್ಟ ಶಾಸಕರಿಗೆ ಪ್ರತ್ಯೇಕವಾಗಿ ಒದಗಿಸಲಾಗುವುದು.**

**ಆರಾಧನಾ ಯೋಜನೆ, ಪರಿಶಿಷ್ಟ ಜಾತಿ ಉಪ ಯೋಜನೆ, ಗಿರಿಜನ ಉಪಯೋಜನೆ: ಈ ಮೂರು ಯೋಜನೆಗಳಡಿಯಲ್ಲಿ ಆಯವ್ಯಯದಲ್ಲಿ ಒದಗಿಸಿದ ಅನುದಾನವನ್ನು ಕ್ರೋಢೀಕರಿಸಿ ಸರ್ಕಾರದಿಂದ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 2013-14 ನೇ ಸಾಲಿನಲ್ಲಿ ರೂ 15.00 ಲಕ್ಷ ಮತ್ತು 2014-15 ನೇ ಸಾಲಿನಲ್ಲಿ ರೂ 11.60 ಲಕ್ಷಗಳಂತೆ ಕಳೆದ 2 ವರ್ಷಗಳಲ್ಲಿ ಒಟ್ಟು ರೂ. 59.60 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. ಈ ಅನುದಾನಕ್ಕೆ ಸಂಬಂಧಿಸಿದಂತೆ ದೇವಸ್ಥಾನಗಳನ್ನು ಆಯಾಯ ಕ್ಷೇತ್ರದ ಆರಾಧನಾ ಸಮಿತಿಯು ಆಯ್ಕೆ ಮಾಡುತ್ತಿದೆ. ಸಮಿತಿಯು ಆಯ್ಕೆ ಮಾಡಿದ ದೇವಸ್ಥಾನಗಳಿಗೆ ಜಿಲ್ಲಾಧಿಕಾರಿಗಳ ಮೂಲಕ ಅನುದಾನ ಬಿಡುಗಡೆ ಮಾಡಲಾಗುತ್ತಿದೆ ಎಂದು ಸಚಿವರು ತಮ್ಮ ಉತ್ತರದಲ್ಲಿ ತಿಳಿಸಿದರು.**

**ಬಾಬು:ಜಿಪಿಆರ್.**

## ಬಣಕಾರ್ ಮತ್ತು ಮಹಾಗಾಂವ್ ಪುಸ್ತಕ ಬಿಡುಗಡೆ

**ಬೆಂಗಳೂರು, ಮಾರ್ಚ್ 24, (ಕರ್ನಾಟಕ ವಾರ್ತೆ)**

ಕರ್ನಾಟಕ ವಿಧಾನ ಮಂಡಲದ ಗ್ರಂಥಾಲಯ ಸಮಿತಿಯು ಪ್ರತಿಭಾವಂತ ಸಂಸದೀಯ ಪಟುಗಳ ಪುಸ್ತಕ ಮಾಲಿಕೆಯಡಿ ಮಾಜಿ ವಿಧಾನಸಭಾಧ್ಯಕ್ಷ ಶ್ರೀ ಬಿ.ಜಿ. ಬಣಕಾರ್ ಮತ್ತು ದಿವಂಗತ ಶಾಸಕ ಚಂದ್ರಶೇಖರ್ ಪಾಟೀಲ್ ಮಹಾಗಾಂವ್‌ಕರ ಅವರುಗಳ ಕುರಿತ ಪುಸ್ತಕ ಬಿಡುಗಡೆ ಸಮಾರಂಭವು ಮಾರ್ಚ್ 26 ರಂದು ಸಂಜೆ 5-30 ಗಂಟೆಗೆ ಬೆಂಗಳೂರು ವಿಕಾಸಸೌಧದ 4ನೇ ಮಹಡಿಯಲ್ಲಿರುವ ಕೊಠಡಿ ಸಂಖ್ಯೆ 419 ರ ಸಮ್ಮೇಳನ ಸಭಾಂಗಣದಲ್ಲಿ ನಡೆಯಲಿದೆ.

ಸಮಾರಂಭದಲ್ಲಿ ಈ ಪುಸ್ತಕಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಬಿಡುಗಡೆ ಮಾಡುವರು. ಸಭೆಯ ಅಧ್ಯಕ್ಷತೆಯನ್ನು ವಿಧಾನ ಪರಿಷತ್ತಿನ ಸಭಾಪತಿ ಶ್ರೀ ಡಿ. ಹೆಚ್. ಶಂಕರಮೂರ್ತಿ ವಹಿಸುವರು. ವಿಧಾನಸಭಾಧ್ಯಕ್ಷ ಶ್ರೀ ಕಾಗೋಡು ತಿಮ್ಮಪ್ಪ ಸಮಾರಂಭವನ್ನು ಉದ್ಘಾಟಿಸುವರು.

ಸಮಾರಂಭದ ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳಾದ ಹೆಚ್.ಡಿ. ಕುಮಾರಸ್ವಾಮಿ, ಜಗದೀಶ್ ಶೆಟ್ಟರ್ ಹಾಗೂ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಕೆ.ಎಸ್. ಈಶ್ವರಪ್ಪ ಪಾಲ್ಗೊಳ್ಳುವರು.

ಬಾಬು:ಜಿಪಿಆರ್

## ಕೃಷಿ ಭಾಗ್ಯ ಯೋಜನೆ :
## ಹೋಬಳಿ ಮಟ್ಟಕ್ಕೆ ವಿಸ್ತರಣೆಗೆ ಪರಿಶೀಲನೆ

**ಬೆಂಗಳೂರು, ಮಾರ್ಚ್ 24, (ಕರ್ನಾಟಕ ವಾರ್ತೆ)**

ಕೃಷಿ ಭಾಗ್ಯ ಯೋಜನೆಯಡಿ ರೈತರಿಗೆ ನೀಡಲಾಗುತ್ತಿರುವ ಪ್ಯಾಕೇಜ್ ಸೌಲಭ್ಯವನ್ನು ಹೋಬಳಿ ಮಟ್ಟಕ್ಕೆ ವಿಸ್ತರಿಸುವ ಬಗ್ಗೆ ಪರಿಶೀಲಿಸುವುದಾಗಿ ಕೃಷಿ ಸಚಿವ ಕೃಷ್ಣಭೈರೇಗೌಡ ತಿಳಿಸಿದರು.

ವಿಧಾನ ಪರಿಷತ್ತಿನಲ್ಲಿಂದು ಸದಸ್ಯೆ ಶ್ರೀಮತಿ ಮೋಟಮ್ಮನವರು ಪ್ರಶ್ನೋತ್ತರ ವೇಳೆಯಲ್ಲಿ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು ಕೃಷಿ ಭಾಗ್ಯ ಯೋಜನೆಯಡಿ ರೈತ ಫಲಾನುಭವಿಗಳನ್ನು ಹಿಂದುಳಿದ ತಾಲ್ಲೂಕುಗಳು ಮತ್ತು 800 ಮಿ. ಲೀಟರ್‌ಗಿಂತ ಕಡಿಮೆ ಮಳೆಯಾಗುವ ಹೋಬಳಿಗಳಿಗೆ ಆದ್ಯತೆ ನೀಡಲಾಗುತ್ತಿದೆ. ಕೆಲವು ಹೋಬಳಿಗಳು ಹಿಂದುಳಿದ ಪ್ರದೇಶವಾಗಿರುವುದರಿಂದ ಮುಂದೆ ಹೋಬಳಿಗೂ ಕೃಷಿ ಭಾಗ್ಯ ಯೋಜನೆಯನ್ನು ವಿಸ್ತರಿಸುವ ಕುರಿತು ಪರಿಶೀಲಿಸಲಾಗುವುದೆಂದು ಭರವಸೆ ನೀಡಿದರು.

ಮಳೆ ಆಧರಿಸಿ ವ್ಯವಸಾಯ ಮಾಡುವ ರೈತರ ಸಹಾಯಕ್ಕಾಗಿ ಜಾರಿಗೊಳಿಸಲಾಗಿರುವ ಈ ಕೃಷಿ ಭಾಗ್ಯ ಯೋಜನೆಗೆ ರೈತರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿರುವ ಹಿನ್ನೆಲೆಯಲ್ಲಿ ಅರ್ಹ ಫಲಾನುಭವಿ ರೈತರಿಗೆಲ್ಲರಿಗೂ ಈ ಪ್ಯಾಕೇಜ್ ಸೌಲಭ್ಯ ದೊರಕುವಂತೆ ಸರ್ಕಾರ ಕ್ರಮವಹಿಸಲಿದೆ ಎಂದರು.

ಬಾಬು:ಪೂರ್ಣಿಮ:ಜಿಪಿಆರ್

## ಲೋಕಾಯುಕ್ತರ ಪ್ರವಾಸ

**ಬೆಂಗಳೂರು, ಮಾರ್ಚ್ 24, (ಕರ್ನಾಟಕ ವಾರ್ತೆ)**

**ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಡಾ. ವೈ ಭಾಸ್ಕರ್ ರಾವ್ ಅವರು ಏಪ್ರಿಲ್ 7 ರಂದು ತುಮಕೂರಿನಲ್ಲಿ ಸಾರ್ವಜನಿಕ ಅಹವಾಲು ಸ್ವೀಕರಿಸಿ ಸಂಬಂಧಿಸಿದ ಅಧಿಕಾರಿಗಳೊಡನೆ ಚರ್ಚಿಸುವರು.**

ಬಾಬು:ಜಿಪಿಆರ್.

# ವಾಣಿಜ್ಯ ಪರೀಕ್ಷೆ ಫಲಿತಾಂಶ

**ಬೆಂಗಳೂರು, ಮಾರ್ಚ್ 24, (ಕರ್ನಾಟಕ ವಾರ್ತೆ)**

2015 ಜನವರಿ ಮಾಹೆಯಲ್ಲಿ ನಡೆದ ವಾಣಿಜ್ಯ ಪರೀಕ್ಷಾ ಫಲಿತಾಂಶ ಪಟ್ಟಿಯನ್ನು ಸಂಬಂಧಿಸಿದ ಸಂಸ್ಥೆಗಳಿಗೆ ಸ್ಪೀಡ್ ಪೋಸ್ಟ್ ಮೂಲಕ ಕಳುಹಿಸಿಕೊಡಲಾಗಿದೆ. ಫಲಿತಾಂಶವನ್ನು ಇಲಾಖಾ ವೆಬ್‌ಸೈಟ್ www.kseeb.kar.nic.in ನಲ್ಲಿ ದಿನಾಂಕ 25-03-2015 ರಂದು ಬೆಳಿಗ್ಗೆ 11-00 ಗಂಟೆಗೆ ಪ್ರಕಟಿಸಲು ತಿಳಿಸಲಾಗಿದೆ. ಸಂಸ್ಥೆಯ ಮುಖ್ಯಸ್ಥರು ತಮ್ಮ ಸಂಸ್ಥೆಗಳಲ್ಲಿ ದಿನಾಂಕ 26-03-2015 ರಂದು ಬೆಳಿಗ್ಗೆ 11-00 ಗಂಟೆಗೆ ಫಲಿತಾಂಶವನ್ನು ಪ್ರಕಟಿಸಲು ತಿಳಿಸಿದೆ.

ಬೆಂಗಳೂರು ನಗರ ಜಿಲ್ಲೆಯ ವಾಣಿಜ್ಯ ಸಂಸ್ಥೆಯ ಮುಖ್ಯಸ್ಥರು ದಿನಾಂಕ 23-03-2015 ರಂದು ಬೆಳಿಗ್ಗೆ 10-00 ಗಂಟೆಗೆ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು - 3 ವಾಣಿಜ್ಯ ಶಾಖೆಯಲ್ಲಿ ಫಲಿತಾಂಶ ಪಟ್ಟಿಯನ್ನು ಖುದ್ದಾಗಿ ಪಡೆದುಕೊಳ್ಳಬಹುದಾಗಿದೆ ಎಂದು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ಪ್ರಕಟಣೆ ತಿಳಿಸಿದೆ.

ಬಾಬು:ಜಿಪಿಆರ್

# ಮಾಸಾಂತ್ಯದೊಳಗೆ ಬಾಕಿ ಪಾವತಿಸದ ಸಕ್ಕರೆ ಕಾರ್ಖಾನೆ ಗೋದಾಮು ವಶ

**ಬೆಂಗಳೂರು, ಮಾರ್ಚ್ 24, (ಕರ್ನಾಟಕ ವಾರ್ತೆ)**

ರೈತರಿಗೆ ಎಫ್.ಆರ್.ಪಿ. ಪ್ರಕಾರ ದರ ನೀಡದೆ ಬಾಕಿ ಉಳಿಸಿಕೊಂಡಿರುವ ಕಾರ್ಖಾನೆಗಳ ಮಾಲಿಕರು ಮಾರ್ಚ್ ಅಂತ್ಯದೊಳಗೆ ಬಾಕಿ ಪಾವತಿಸದಿದ್ದಲ್ಲಿ ಕಾರ್ಖಾನೆಗಳ ಗೋದಾಮುಗಳನ್ನು ವಶಪಡಿಸಿಕೊಳ್ಳಲಾಗುವುದೆಂದು ಸಕ್ಕರೆ ಸಚಿವ ಹೆಚ್. ಎಸ್. ಮಹದೇವಪ್ರಸಾದ್ ಅವರು ತಿಳಿಸಿದರು.

ವಿಧಾನ ಪರಿಷತ್ತಿನಲ್ಲಿಂದು ಸದಸ್ಯರಾದ ರಘುನಾಥರಾವ್ ಮಲ್ಕಾಪುರೆ ಅವರು ಪ್ರಶ್ನೋತ್ತರ ಕಲಾಪ ವೇಳೆಯಲ್ಲಿ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು 2014-15 ನೇ ಸಾಲಿನಲ್ಲಿ ಸಕ್ಕರೆ ಕಾರ್ಖಾನೆಗಳು ಮಾರ್ಚ್ 13 ರವರೆಗೆ ಒಟ್ಟು ಪಾವತಿಸಬೇಕಾದ ರೂ. 7827.87 ಕೋಟಿ ಪೈಕಿ ರೂ. 5403.51 ಕೋಟಿಗಳನ್ನು

ಪಾವತಿಸಲಾಗಿದ್ದು 2424.36 ಕೋಟಿ ರೂ. ಮಾತ್ರ ಬಾಕಿ ಇದ್ದು, ಶೇಕಡ 70 ರಷ್ಟು ಕಬ್ಬಿಗೆ ಹಣ ಪಾವತಿಯಾಗಿದೆ ಎಂದರು.

ಪ್ರಸಕ್ತ ಸಾಲಿನಲ್ಲಿ ಕಳೆದ ವರ್ಷಕ್ಕಿಂತಲೂ ಕಬ್ಬಿನ ಬೆಳೆ ಜಾಸ್ತಿಯಾಗಿರುವುದರಿಂದ ಕಾರ್ಖಾನೆಗಳ ಮೇಲೆ ಕ್ರಮಕೈಗೊಂಡರೆ ಎಲ್ಲ ರೈತರಿಗೆ ತೊಂದರೆಯಾಗುತ್ತದೆ ಎಂಬ ಕಾರಣದಿಂದ ಸರ್ಕಾರವು ಕಾರ್ಖಾನೆಗಳ ಮೇಲೆ ಕ್ರಮಕೈಗೊಳ್ಳಲು ತಡ ಮಾಡಿತ್ತು. 2013-14 ನೇ ಸಾಲಿನಲ್ಲಿ ದರ ಪಾವತಿಸದ ಸಕ್ಕರೆ ಕಾರ್ಖಾನೆಗಳಿಂದ 6 ಲಕ್ಷದ 82 ಸಾವಿರ ಕ್ವಿಂಟಾಲ್ ಸಕ್ಕರೆಯನ್ನು ವಶಪಡಿಸಿಕೊಳ್ಳಲಾಗಿದೆ. ಮಾರ್ಚ್ ಮಾಹೆಯ ಅಂತ್ಯದೊಳಗೆ ಹಣ ಪಾವತಿಸದ ಸಕ್ಕರೆ ಕಾರ್ಖಾನೆಗಳ ಗೋದಾಮಿನಲ್ಲಿರುವ ಸಕ್ಕರೆಯನ್ನು ಜಪ್ತಿ ಮಾಡಿಕೊಳ್ಳುವ ಮೂಲಕ ರೈತರಿಗೆ ಬರಬೇಕಾದ ಬಾಕಿ ಹಣವನ್ನು ಪಾವತಿಸಲಾಗುವುದು.

ಬಾಬು:ಪೂರ್ಣಿಮ:ಜಿಪಿಆರ್

# ಟೀಯೆಸ್ಸಾರ್ ಪ್ರಶಸ್ತಿ ಪ್ರದಾನ ಸಮಾರಂಭ

**ಬೆಂಗಳೂರು, ಮಾರ್ಚ್ 24, (ಕರ್ನಾಟಕ ವಾರ್ತೆ)**

2012 ಹಾಗೂ 2013 ನೇ ಸಾಲಿನ ಟೀಯೆಸ್ಸಾರ್ ಸ್ಮಾರಕ, ಮೊಹರೆ ಹಣಮಂತರಾಯ, ಅಭಿವೃದ್ಧಿ ಹಾಗೂ ಪತ್ರಿಕೋದ್ಯಮ ಪ್ರಶಸ್ತಿಗಳನ್ನು ಮಾರ್ಚ್ 27 ರ ಶುಕ್ರವಾರ ಸಂಜೆ 6-00 ಗಂಟೆಗೆ ಬೆಂಗಳೂರು ವಾರ್ತಾ ಸೌಧದ ಸುಲೋಚನಾ ಸಭಾಂಗಣದಲ್ಲಿ ಪ್ರದಾನ ಮಾಡುವ ಸಮಾರಂಭ ನಡೆಯಲಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಶಸ್ತಿ ಪ್ರದಾನ ಮಾಡಲಿದ್ದು, ಮೂಲ ಸೌಲಭ್ಯ ಅಭಿವೃದ್ಧಿ, ಹಜ್ ಹಾಗೂ ವಾರ್ತಾ ಖಾತೆ ರಾಜ್ಯ ಸಚಿವ ಶ್ರೀ ಆರ್. ರೋಷನ್ ಬೇಗ್ ಅವರು ಸಮಾರಂಭದ ಅಧ್ಯಕ್ಷತೆ ವಹಿಸುವರು. ಸಾರಿಗೆ ಸಚಿವ ಶ್ರೀ ರಾಮಲಿಂಗಾರೆಡ್ಡಿ, ಲೋಕಸಭಾ ಸದಸ್ಯ ಶ್ರೀ ಪಿ. ಸಿ. ಮೋಹನ್, ಕರ್ನಾಟಕ ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಾಧೀಶ ಹಾಗೂ 2012, 2013 ನೇ ಸಾಲಿನ ಪತ್ರಿಕೋದ್ಯಮ ಪ್ರಶಸ್ತಿ ಆಯ್ಕೆ ಸಮಿತಿ ಅಧ್ಯಕ್ಷ ನ್ಯಾಯಮೂರ್ತಿ ಶ್ರೀ ಅರಳಿ ನಾಗರಾಜ್ ಮತ್ತು ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷ ಶ್ರೀ ಎಂ. ಎ. ಪೊನ್ನಪ್ಪ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

2012 ನೇ ಸಾಲಿನ ಟೀಯೆಸ್ಸಾರ್ ಸ್ಮಾರಕ ಪತ್ರಿಕೋದ್ಯಮ ಪ್ರಶಸ್ತಿಯು ಶ್ರೀ ಎನ್. ಅರ್ಜುನದೇವ ಅವರಿಗೆ 2013 ನೇ ಸಾಲಿನ ಟೀಯೆಸ್ಸಾರ್ ಸ್ಮಾರಕ ಪತ್ರಿಕೋದ್ಯಮ ಪ್ರಶಸ್ತಿಯು ಶ್ರೀ ಪಿ. ಎಸ್. ಈಶ್ವರ ಭಟ್ (ಈಶ್ವರ ದೈತೋಟ) ಅವರಿಗೆ ಪ್ರದಾನವಾಗಲಿದೆ. 2012 ನೇ ಸಾಲಿನ ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿ ಶ್ರೀ ರಾಘವೇಂದ್ರ ಅರವಿಂದರಾವ್ ಜೋಷಿ, 2013 ನೇ ಸಾಲಿನ ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿ ಶ್ರೀ ಕೆ.ಬಿ. ಗಣಪತಿ, 2012 ನೇ ಸಾಲಿನ ಅಭಿವೃದ್ಧಿ ಪತ್ರಿಕೋದ್ಯಮ ಪ್ರಶಸ್ತಿ ಶ್ರೀ ಅಂಶಿ ಪ್ರಸನ್ನಕುಮಾರ್, 2013 ನೇ ಸಾಲಿನ ಅಭಿವೃದ್ಧಿ ಪತ್ರಿಕೋದ್ಯಮ ಪ್ರಶಸ್ತಿ ಶ್ರೀ ಸದಾನಂದ ಪೆರ್ಲ ಅವರಿಗೆ ಪ್ರದಾನ ಮಾಡಲಾಗುವುದು. 2012 ನೇ ಸಾಲಿನ ಪರಿಸರ ಪತ್ರಿಕೋದ್ಯಮ ಪ್ರಶಸ್ತಿಯನ್ನು

ಡಾ: ನರೇಂದ್ರ ರೈ, ದೇರ್ಲ ಹಾಗೂ 2013 ನೇ ಸಾಲಿನ ಪರಿಸರ ಪತ್ರಿಕೋದ್ಯಮ ಪ್ರಶಸ್ತಿಯನ್ನು ಶ್ರೀ ದೀಪಕ್ ಸಾಗರ ಅವರಿಗೆ ಪ್ರದಾನ ಮಾಡಲಾಗುವುದು.

ಪ್ರಶಸ್ತಿ ವಿಜೇತರಿಗೆ ನಗದು, ಪ್ರಶಸ್ತಿ ಫಲಕ ನೀಡಿ ಗೌರವಿಸಲಾಗುವುದು.

ಬಾಬು/ಕೆಎಂ